ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೆರಡನೆಯ ಅಧಿವೇಶನ

ಸೋಮವಾರ, ದಿನಾಂಕ : 07 ನೇ ಡಿಸೆಂಬರ್, 2020

ಆಶಾ ಕಾರ್ಯಕರ್ತೆಯರ ಗೌರವಧನ ಮತ್ತು ಪ್ರೋತ್ಸಾಹಧನ ನೀಡುವ ಬಗ್ಗೆ

ಶ್ರೀ ಕೆ. ಎ. ತಿಪ್ಪೇಸ್ವಾಮಿ(ನಾಮನಿರ್ದೇಶನ ಹೊಂದಿದವರು) –

80 (76) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಮತ್ತು ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕೋವಿಡ್-19 ನಿಮಿತ್ತ ಕರ್ತವ್ಯ ನಿರ್ವಹಿಸುತ್ತಿರುವ ಆಶಾ ಕಾರ್ಯಕರ್ತೆಯರಿಗೆ ಗೌರವಧನದ ಜೊತೆಗೆ ಹೆಚ್ಚಿನ ಪ್ರೋತ್ಸಾಹಧನವನ್ನೇನಾದರೂ ನೀಡಲಾಗುತ್ತಿದೆಯೇ; (ವಿವರಗಳನ್ನು ನೀಡುವುದು)

(ಆ) ಆಶಾ ಕಾರ್ಯಕರ್ತೆಯರಿಗೆ ಪ್ರತಿ ತಿಂಗಳು ಸಕಾಲಕ್ಕೆ ಗೌರವಧನ ನೀಡಲಾಗುತ್ತಿದೆಯೇ; (ಮಾಹಿತಿ ಒದಗಿಸುವುದು)

(ಇ) ಕೋವಿಡ್-19 ಕರ್ತವ್ಯದ ಅವಧಿಯಲ್ಲಿ ಆಶಾ ಕಾರ್ಯಕರ್ತೆಯರು ಸಾವನ್ನಪ್ಪಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಎಷ್ಟು ಮಂದಿ ಕಾರ್ಯಕರ್ತೆಯರು ಸಾವಿಗೀಡಾಗಿದ್ದಾರೆ (ಸಂಪೂರ್ಣ ಮಾಹಿತಿ ನೀಡುವುದು)

(ಈ) ಕೋವಿಡ್-19 ವಿರುದ್ಧ ಹೋರಾಡುವ ಆರೋಗ್ಯ ಕಾರ್ಯಕರ್ತರಿಗೆ ಪ್ರಧಾನ್ ಮಂತ್ರಿ ಗರೀಬ್ ಕಲ್ಯಾಣ್ ಪ್ಯಾಕೇಜ್ ಅಡಿಯಲ್ಲಿ, ಎಷ್ಟು ಸಂಖ್ಯೆಯ ವಿಮಾ ಯೋಜನೆಯ ಹಕ್ಕುಗಳನ್ನು ಸಲ್ಲಿಸಲಾಗಿದೆ ಮತ್ತು ಎಷ್ಟು ಸಂಖ್ಯೆಯ ಹಕ್ಕುಗಳು ನಿರ್ಧರಿತಗೊಂಡಿವೆ;

(ಉ) ವೈದ್ಯರು ಮತ್ತು ಆಶಾ ಕಾರ್ಯಕರ್ತೆಯರಿಗೆ ನೀಡಬಹುದಾದ 2020ರ ಅಕ್ಟೋಬರ್‌ನಲ್ಲಿ ಮುಕ್ತಾಯಗೊಳ್ಳಲ್ಲಿದ್ದ ವಿಮೆಯನ್ನು ವಿಸ್ತರಿಸಲಾಗಿದೆಯೇ? (ವಿವರಗಳನ್ನು ಒದಗಿಸುವುದು)